ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಶುಕ್ರವಾರ, ದಿನಾಂಕ: 11ನೇ ಡಿಸೆಂಬರ್, 2020

ಸರ್ಕಾರಿ ಜಾಗಗಳಲ್ಲಿ ವಾಸಿಸುತ್ತಿರುವ ಕುಟುಂಬಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಕುರಿತು

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

410(547) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಡ್ಯ ಜಿಲ್ಲೆ ವ್ಯಾಪ್ತಿಯಲ್ಲಿ ಸರ್ಕಾರದ ಜಾಗ/ಸ್ಥಳಗಳಲ್ಲಿ ಕಳೆದ 5 ವರ್ಷಗಳಿಂದ ವಾಸವಾಗಿರುವ ಕುಟುಂಬಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಸದರಿ ಸರ್ಕಾರಿ ಜಾಗದಲ್ಲಿ ವಾಸ ಮಾಡುತ್ತಿರುವ ಈ ಕುಟುಂಬಗಳಿಗೆ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗಿದೆಯೇ; (ತಾಲ್ಲೂಕುವಾರು, ಕುಟುಂಬವಾರು, ಫಲಾನುಭವಿಗಳಾವರು ಮಾಹಿತಿ ನೀಡುವುದು)

(ಇ) ಒದಗಿಸಿದ್ದಲ್ಲಿ, ಅಂತಹ ಎಷ್ಟು ಕುಟುಂಬಗಳಿಗೆ ಹಕ್ಕುಪತ್ರ ವಿತರಣೆ ಮಾಡಲಾಗಿದೆ; ಹಕ್ಕುಪತ್ರ ವಿತರಣೆ ಮಾಡದಿರುವ ಕುಟುಂಬಗಳಿಗೆ ಯಾವ ಕಾಲಮಿತಿಯೊಳಗೆ ಹಕ್ಕುಪತ್ರಗಳನ್ನು ವಿತರಣೆ ಮಾಡಲಾಗುವುದು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ಹಕ್ಕುಪತ್ರ ವಿತರಣೆ ಮಾಡಿರುವುದರಿಂದ ಸರ್ಕಾರಕ್ಕೆ ಪಾವತಿಸುವ ತೆರಿಗೆಯ ಮೊತ್ತ ಸರ್ಕಾರದ ಖಜಾನೆಗೆ ಜಮಾ ಆಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ?